ಇನ್ನುಳಿದ 223 ಬೆಳೆ ನಷ್ಟ ಪ್ರಕರಣಗಳಿಗೆ ಪರಶೀಲಿಸಿ ನಿಯಮಾನುಸಾರ ದಯಾತ್ಮಕ ಧನ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಹೋಬಳಿ ಕೇಂದ್ರವನ್ನಾಗಿ ಮಾಡುವುದು

878 (757); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಹಿರೇಕೆರೂರು ತಾಲ್ಲೂಕಿನ ಮಾಸೂರ ಗ್ರಾಮವನ್ನು ಯಾವಾಗ ಹೋಬಳಿ ಕೇಂದ್ರ ಸ್ಥಾನವನ್ನಾಗಿ ಮಾಡಲು ಕ್ರಮ ಕೈಗೊಳ್ಳಲಾಗುವುದು;

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಹಿರೇಕೆರೂರು ತಾಲ್ಲೂಕಿನ ಮಾಸೂರು ಗ್ರಾಮವನ್ನು ಹೋಬಳಿ ಕೇಂದ್ರವನ್ನಾಗಿಸುವ ಸಂಬಂಧ ತಗಲುವ ಆರ್ಥಿಕ ವೆಚ್ಚದ ಪೂರ್ಣ ಮಾಹಿತಿಯನ್ನು ಒದಗಿಸುವಂತೆ ದಿನಾಂಕ: 23.01.2015 ರಂದು ಹಾವೇರಿ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ.

ಜಿಲ್ಲಾಧಿಕಾರಿಯವರಿಂದ ಮಾಹಿತಿ ಬಂದ ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

"ಸಾಮಾಜಿಕ ಭದ್ರತೆ ಯೋಜನೆ"

879 (759); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ದಿನಾಂಕ: 31.12.2014 ರ ಅಂತ್ಯಕ್ಕೆ ರಾಜ್ಯದಲ್ಲಿರುವ ಸಂಧ್ಯಾ ಸುರಕ್ಷಾ, ಅಂಗವಿಕಲ, ವಿಧವಾ ವೇತನ ಹಾಗೂ ಮನಸ್ವಿನಿ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)